5

156ನೇ ಸಂ = 30
ದಿ: 12/03/2025

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ಧನಂಜಯ ಸರ್ಜಿ ಇವರ ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

ವಿಷಯ:

ರಾಜ್ಯದ ಪದವೀಧರರ ನಿರುದ್ಯೋಗಿಗಳಿಗೆ ರಾಜ್ಯ ಸರ್ಕಾರದ ವಿವಿಧ ಗ್ರೂಪ್ ಸಿ ಮತ್ತು ಬಿ ಹುದ್ದೆಗಳಿಗೆ ಸೀಮಿತ ಅವಕಾಶವಿರುವುದರಿಂದ ಪದವೀಧರರು ಅದರಲ್ಲೂ ಕನ್ನಡ ಮಾಧ್ಯಮದ ಅಭ್ಯರ್ಥಿಗಳು ಕೇಂದ್ರದ ಎಸ್.ಎಸ್.ಸಿ ಮೂಲಕ ನಡೆಸಲಾಗುವ ಕಂಬೈನ್ಡ್ ಗ್ರಾಜ್ಯುವೇಟ್ ಲವೆಲ್ ಎಕ್ಸಾಮ್, ಕಂಬೈನ್ಡ್ ಹೈಯರ್ ಸೆಕಂಡರಿ ಲವೆಲ್ ಎಕ್ಸಾಮ್, ಕೇಂದ್ರ ಅಬಕಾರಿ ಇಲಾಖೆ, ಲೆಕ್ಕ ಪರಿಶೋಧಕರು ಸಿ.ಬಿ.ಐ., ಇ.ಡಿ., ಕೇಂದ್ರದ ಪೋಸ್ಟಲ್, ರೈಲ್ವೆ ಇಲಾಖೆ ವಿವಿಧ ಬ್ಯಾಂಕಿಂಗ್ ಹುದ್ದೆಗಳಿಗೆ ನೇಮಕಗೊಳ್ಳುವಲ್ಲಿ ವಿಫಲವಾಗುತ್ತಿರುವುದು, ರಾಜ್ಯದ ಶೈಕ್ಷಣಿಕ ಪಠ್ಯಕ್ರಮವು ಕೇಂದ್ರ ಸರ್ಕಾರದ ವಿವಿಧ ಹುದ್ದೆಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಯಾಗಿ ತೇರ್ಗಡೆಯಾಗಲು ಪೂರಕವಾಗಿಲ್ಲದಿರುವುದರಿಂದ ರಾಜ್ಯದಲ್ಲಿ ಪದವಿ ಮತ್ತು ಉನ್ನತ ವ್ಯಾಸಂಗ ಕೋರ್ಸ್‌ಗಳ ಪಠ್ಯಕ್ರಮಗಳನ್ನು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅದರಲ್ಲೂ ಕೇಂದ್ರ ಸರ್ಕಾರದ ಯು.ಪಿ.ಎಸ್.ಸಿ ಮತ್ತು ಎಸ್.ಎಸ್.ಸಿ ಇತರೆ ನೇಮಕಾತಿಗಳಿಗೆ ಅನುಕೂಲವಾಗುವಂತೆ ಪರಿಷ್ಕೃತಗೊಳಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಸ್ವಾಯತ್ತ ಸಂಸ್ಥೆಗಳಾಗಿದ್ದು, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 33ರಲ್ಲಿ ವಿಶ್ವವಿದ್ಯಾಲಯಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಆಯಾ ವಿಶ್ವವಿದ್ಯಾಲಯಗಳು ನಡೆಸುವ ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಿಗೆ Board of Studies (ಅಧ್ಯಯನ ಮಂಡಲಿ) ಪಠ್ಯಕ್ರಮವನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ. ಅಧ್ಯಯನ ಮಂಡಳಿಯಲ್ಲಿ ಉದ್ಯಮ ಮತ್ತು ಪರಿಣಿತ ವಲಯದ ಸಂಪನ್ಮೂಲ ವ್ಯಕ್ತಿಗಳನ್ನು ಒಳಗೊಂಡಂತೆ ವಿಷಯ ತಜ್ಞರು, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಗುಣಮಟ್ಟಕ್ಕನುಗುಣವಾಗಿ ಪಠ್ಯಕ್ರಮಗಳನ್ನು ರೂಪಿಸಿಕೊಳ್ಳುತ್ತಿವೆ.

ಯುಜಿಸಿಯು ರಾಜ್ಯದ ವಿಶ್ವವಿದ್ಯಾಲಯಗಳಿಗೆ ಪಠ್ಯಕ್ರಮ ರಚನೆಗೆ ಮಾರ್ಗಸೂಚಿಗಳನ್ನು ಒದಗಿಸಿದ್ದು, ಇದರಲ್ಲಿ lectures, tutorials, laboratory work, field work, project work, and other components ಗಳನ್ನು ವಿವರಿಸಿದ್ದು, ಈ ಪಠ್ಯಕ್ರಮಗಳ ರಚನೆಯು ಸಮಗ್ರ ಶಿಕ್ಷಣ, ಪರಿಕಲ್ಪನಾತ್ಮಕ ತಿಳುವಳಿಕೆ, ಸೃಜನಶೀಲತೆ ಮತ್ತು ವಿಮರ್ಶಾತ್ಮಕ ಚಿಂತನೆ, ನೀತಿಶಾಸ್ತ್ರ, ಮತ್ತು ಮಾನವ ಮತ್ತು ಸಾಂವಿಧಾನಿಕ ಮೌಲ್ಯಗಳು, ಜೀವನ ಕೌಶಲ್ಯಗಳು, ವೈವಿಧ್ಯತೆ ಮತ್ತು ಭೌಗೋಳಿಕ ರಚನೆ ಆಧಾರದಲ್ಲಿ ಕಲಿಕೆಯ ಉದ್ದೇಶಗಳನ್ನು ಒಳಗೊಂಡಿರುತ್ತದೆ.

ರಾಜ್ಯ ಶಿಕ್ಷಣ ನೀತಿ ಆಯೋಗವು ಸರ್ಕಾರಕ್ಕೆ ನೀಡಿದ ಮಧ್ಯಂತರ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಯುಎನ್‌ಇ 2023, ದಿನಾಂಕ: 08.05.2024ರಲ್ಲಿ 2024-25ನೇ ಶೈಕ್ಷಣಿಕ ಸಾಲಿಗೆ ಪಠ್ಯ ಕ್ರಮದಲ್ಲಿ ಈಗಾಗಲೇ ಕೆಲವು ಬದಲಾವಣೆಗಳನ್ನು ತರಲಾಗಿದ್ದು, ಪಠ್ಯಕ್ರಮ ರಚನೆಯಲ್ಲಿನ ಬದಲಾವಣೆಯ ಮೂಲಕ ಆಳವಾದ ಜ್ಞಾನ, ಔದ್ಯಮಿಕ ಆಧಾರಿತ ಕೋರ್ಸ್‌ಗಳನ್ನು ಮತ್ತು ಪ್ರಾದೇಶಿಕ ನಿರ್ದಿಷ್ಟ ವಿಷಯಗಳನ್ನು ವಿಶ್ವವಿದ್ಯಾಲಯಗಳ ಅಧ್ಯಯನ ಮಂಡಳಿಗೆ (Board of Studies) ಸ್ವಾಯತ್ತತೆಯನ್ನು ನೀಡುವುದನ್ನು ಕೇಂದ್ರೀಕರಿಸಲಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರಕವಾಗುವಂತೆ ರಾಜ್ಯ ಶಿಕ್ಷಣ ನೀತಿಯಲ್ಲಿ Compulsory Skilled Course ಗಳನ್ನು ಮತ್ತು 02 Elective Paper ಗಳನ್ನು ಪರಿಚಯಿಸಿರುವುದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ Main Subjects ಒಟ್ಟಿಗೆ Environmental Science, Constitutions Values, Skilled base Courses (ಕಲಿಕೆ ಜೊತೆ ಕೌಶಲ್ಯ) Apprenticeship-embedded degree courses ಗಳನ್ನು ಸಹ ಪಠ್ಯಕ್ರಮದ ಭಾಗವಾಗಿ ಪರಿಗಣಿಸಲಾಗಿದೆ. Elective Subjects ಗಳಿಂದ ವಿದ್ಯಾರ್ಥಿಗಳು ಒಂದ್ದು ವಿಷಯದಿಂದ ಮತ್ತೊಂದು ವಿಷಯ ಕಲಿಕೆಗೆ Trans-border ಅವಕಾಶವನ್ನು ಕಲ್ಪಿಸಿರುವುದರಿಂದ, ಇದು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಚ್ಚು ಸಹಕಾರಿಯಾಗಿರುತ್ತದೆ.

**ಸಂಖ್ಯೆ: ಇಡಿ 261 ಯುಎನ್‌ಇ 2025**

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ, ಸಚಿವರು